ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು

**ಸಿ.ಸಿ.ನಂ.2370/2022**

ದಿನಾಂಕ:**11.11.2025** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು

| ಸಾಕ್ಷಿಯ ಹೆಸರು | ಲೋಕೇಶ್ | ಚಾಸಾ-3, ಪ್ರಾಸಾ-2 |
|---|---|---|
| ತಂದೆಯ ಹೆಸರು | ಕೊಳಗುಂದ ರಾಮಣ್ಣ | |
| ವಯಸ್ಸು | 58 ವರ್ಷ | |
| ಉದ್ಯೋಗ | ವ್ಯಾಪಾರ | |
| ವಾಸ | ಕಡೂರು | |

ಮುಖ್ಯ ವಿಚಾರಣೆ: ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:

ಚಾಸಾ 1, 2 ನನಗೆ ಗೊತ್ತಿಲ್ಲ. ಆರೋಪಿ ನನಗೆ ಗೊತ್ತಿಲ್ಲ. ಈ ಕೇಸಿನ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಸಾಕ್ಷಿಯು ಈಗ ನೋಡುತ್ತಿರುವ ದಾಖಲೆಯಲ್ಲಿ ತನ್ನ ಸಹಿ ನೋಡಿ ಗುರುತಿಸಿದರು, ಸದರಿ ದಾಖಲೆಯು ಮಹಜರ್ ಆಗಿದ್ದು ಅದನ್ನು ಈಗಾಗಲೇ ನಿಪಿ 1 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ1 ಬಿ ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ನಾನು ಸು.3 ವರ್ಷಗಳ ಹಿಂದೆ ಪೋಲೀಸರ ಕೋರಿಕೆಯ ಮೇರೆಗೆ ಮಾಡಿರುತ್ತೇನೆ. ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ ಹಾಗೂ ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ ಮತ್ತು ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ. ನಿಪಿ1 ಕ್ಕೆ ಬೇರೆ ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

ಈಗ ನೋಡುತ್ತಿರುವ ಮು ಮಾ 1 ರ ಚೀಟಿಯ ಮೇಲೆ ನನ್ನ ಸಹಿ ಇದೆ. ಸಾಕ್ಷಿಯ ಸಹಿಯನ್ನು ಮು ಮಾ 1-ಬಿ ಎಂದು ಗುರುತಿಸಲಾಯಿತು. ಸದರಿ ಮು ಮಾ 1 ನ್ನು ನನಗೆ ಗುರುತಿಸಲು ಸಾದ್ಯವಾಗುವುದಿಲ್ಲ. ನಾನು ಪೋಲೀಸರಿಗೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

**(**ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ**,** ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು**)**

ಪಾಟೀ ಸವಾಲು: ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:

ದಿ:27.03.2020 ಪೋಲೀಸರು ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವ ಮಾಹಿತಿ ಇದ್ದು, ಫಾರೆಸ್ಟ್ ಚೆಕ್ ಪೋಸ್ಟ್ ಬಳಿ ದಾಳಿ ಮಾಡಲು ಸಾಕ್ಷಿಯಾಗಿ ಬನ್ನಿ ಎಂದು

ನನ್ನನ್ನು ಮತ್ತು ಚಾಸಾ 2 ರವರನ್ನು ಕರೆದುಕೊಂಡು ಹೋದರು ಎಂದರೆ ಸರಿಯಲ್ಲ. ನಂತರ ಸ್ಥಳಕ್ಕೆ ರಾತ್ರಿ 9.15 ಗಂಟೆಗೆ ಹೋಗಿ ನೋಡಿದಾಗ ಅಲ್ಲಿ ಆರೋಪಿಯು ಅಕ್ರಮವಾಗಿ ಒಂದು ಪ್ಲಾಸ್ಟಿಕ್ ಚೀಲ ಇಟ್ಟು ಕೊಂಡಿರುವುದು ಕಂಡುಬಂದಿರುತ್ತದೆ ಎಂದರೆ ಸರಿಯಲ್ಲ. ನಂತರ ಚಾಸಾ 1 ರವರು ಹೋಗಿ ಸದರಿ ವ್ಯಕ್ತಿಯ ಬಳಿ ವಿಚಾರಿಸಿದಾಗ ಆತನು ಒಂದು ಪ್ಲಾಸ್ಟಿಕ್ ಕವರಿನಲ್ಲಿ ಹಿಡಿದುಕೊಂಡಿದ್ದು ಅದರಲ್ಲಿ ಮದ್ಯ ಇರುವುದಾಗಿ ಆರೋಪಿ ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. ನಂತರ ಸದರಿ ಮದ್ಯ ಮಾರಾಟ ಮಾಡಲು ಪರವಾನಗೆ ಇದೆಯೇ ಎಂದು ವಿಚಾರಿಸಿದಾಗ ಇಲ್ಲ ಎಂದು ಹೇಳಿದ ಮೇರೆಗೆ ಚಾಸಾ 1 ರವರು ಕವರ್ ಅನ್ನು ನಮ್ಮ ಸಮಕ್ಷಮ ಪರಿಶೀಲನೆ ಮಾಡಿದಾಗ ಅದರಲ್ಲಿ 90 ಎಂ.ಎಲ್.ನ 26 ಮದ್ಯದ ಪೌಚುಗಳು ಇತ್ತು ಎಂದರೆ ಸರಿಯಲ್ಲ. ಅದರ ಅಂದಾಜು ಬೆಲೆ ರೂ.788/-ಗಳು ಎಂದು ನಾವು ಅಭಿಪ್ರಾಯ ಪಟ್ಟಿರುತ್ತೇವೆ ಎಂದರೆ ಸರಿಯಲ್ಲ. ಸದರಿ ವ್ಯಕ್ತಿಯು ಸದರಿ ಮದ್ಯವನ್ನು ಗುರುಪ್ರಸಾದ್ ವೈನ್ ಶಾಪ್ ನಿಂದ ಖರೀದಿಸಿದ್ದಾಗ ತಿಳಿಸಿದರು ಎಂದರೆ ಸರಿಯಲ್ಲ. ನಂತರ ಎಲ್ಲಾ ಮದ್ಯವನ್ನು ರಾತ್ರಿ 9.15 ರಿಂದ 10.15 ರ ವರೆಗೂ ನಿಪಿ1 ರಂತೆ ಮಹಜರ್ ಮೂಲಕ ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಮದ್ಯವನ್ನು ಬಿಳಿ ಬ್ಯಾಗ್ ಗೆ ಹಾಕಿ ಹೊಲಿದು ಪ್ಯಾಕ್ ಮಾಡಿ ನಮ್ಮಗಳ ಸಹಿ ಇರುವ ಚೀಟಿ ಅಂಟಿಸಿದರು ಎಂದರೆ ಸರಿಯಲ್ಲ.

ಈಗ ಓದಿ ಹೇಳಿದಂತೆ ದಿಃ27.03.2020 ರಂದು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಹೇಳಿಕೆಯನ್ನು ನಿಪಿ-3 ಎಂದು ಗುರುತಿಸಲಾಯಿತು. ಈ ಕೇಸಿನ ಎಲ್ಲಾ ವಿಚಾರಗಳು ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀಸವಾಲುಃ ಆರೋಪಿ ಪರ ವಕೀಲರಿಂದ ಃಇಲ್ಲ

ಮರು ವಿಚಾರಣೆ ಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ ಒ,

sd/-
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.